All India Radio: Bangalore
National Bulletin In Kannada
01.09.2025 07.35 a.m.
ಆಕಾಶವಾಣಿ, ಬೆಂಗಳೂರು
ರಾಷ್ಟ್ರೀಯ ವಾರ್ತೆಗಳು
<><><><>

ಮುಖ್ಯಾಂಶಗಳು

1. ಇಂದಿನಿಂದ ರಾಷ್ಟ್ರಪತಿ ದ್ರೌಪದಿ ಮುರ್ಮು ಕರ್ನಾಟಕ-ತಮಿಳುನಾಡು ಪ್ರವಾಸ; ಮೈಸೂರಿನಲ್ಲಿ ಅಖಿಲ ಭಾರತ ವಾಕ್ ಮತ್ತು ಶ್ರವಣ ಸಂಸ್ಥೆಯ ವಜ್ರ ಮಹೋತ್ಸವದಲ್ಲಿ ಭಾಗಿ
2. ಎಸ್‌ಸಿಒ ಶೃಂಗಸಭೆಯಲ್ಲಿಂದು ಅಧಿವೇಶನವನ್ನುದ್ದೇಶಿಸಿ ಪ್ರಧಾನಿ ನರೇಂದ್ರ ಮೋದಿ ಭಾಷಣ
3. ಜಮ್ಮುವಿನಲ್ಲಿಂದು ರಕ್ಷಣಾ ಕಾರ್ಯ ಹಾಗೂ ವಿಪತ್ತು ಹಾನಿ ಪರಿಶೀಲನೆ ನಡೆಸಲಿರುವ ಕೇಂದ್ರ ಗೃಹ ಸಚಿವ ಅಮಿತ್ ಶಾ
4. ವಿವಿಧ ರಾಜ್ಯಗಳಲ್ಲಿ ಸಂಭವಿಸಿದ ನೈಸರ್ಗಿಕ ವಿಪತ್ತು ಪರಿಶೀಲನೆಗೆ ಅಂತರ-ಸಚಿವಾಲಯ ಕೇಂದ್ರ ತಂಡಗಳ ರಚನೆ
5. ಏಷ್ಯಾಕಪ್ ಹಾಕಿ ಪಂದ್ಯಾವಳಿ ; ಸೂಪರ್ ೪ರ ಹಂತ ಪ್ರವೇಶಿಸಿದ ಭಾರತ

<><><><>

ರಾಷ್ಟ್ರಪತಿ ದ್ರೌಪದಿ ಮುರ್ಮು ಅವರು ಇಂದಿನಿಂದ ಮೂರು ದಿನಗಳ ಕರ್ನಾಟಕ ಮತ್ತು ತಮಿಳುನಾಡು ಪ್ರವಾಸ ಕೈಗೊಳ್ಳಲಿದ್ದಾರೆ. ಇಂದು ಅವರು ಮೈಸೂರಿನಲ್ಲಿ ನಡೆಯುವ ಅಖಿಲ ಭಾರತ ವಾಕ್ ಮತ್ತು ಶ್ರವಣ ಸಂಸ್ಥೆಯ ವಜ್ರ ಮಹೋತ್ಸವ ಸಮಾರಂಭದಲ್ಲಿ ಭಾಗವಹಿಸಲಿದ್ದಾರೆ. ನಂತರ ರಾಷ್ಟ್ರಪತಿಯವರು, ಚಾಮುಂಡಿ ಬೆಟ್ಟಕ್ಕೆ ಭೇಟಿ ನೀಡಿ, ತಾಯಿ ಚಾಮುಂಡೇಶ್ವರಿಯ ದರ್ಶನ ಪಡೆಯಲಿದ್ದಾರೆ. ರಾಜವಂಶಸ್ಥೆ ಪ್ರಮೋದಾದೇವಿ ಒಡೆಯರ್ ಅವರ ಆಹ್ವಾನದ ಮೇರೆಗೆ ರಾಷ್ಟ್ರಪತಿಯವರು ಮೈಸೂರು ಅರಮನೆಗೂ ಭೇಟಿ ನೀಡುವ ನಿರೀಕ್ಷೆಯಿದೆ. ನಾಳೆ ರಾಷ್ಟ್ರಪತಿ ಚೆನ್ನೈನಲ್ಲಿ ನಡೆಯುವ ಸಿಟಿ ಯೂನಿಯನ್ ಬ್ಯಾಂಕ್‌ನ ೧೨೦ನೇ ಸಂಸ್ಥಾಪನಾ ದಿನಾಚರಣೆ ಕಾರ್ಯಕ್ರಮದಲ್ಲಿ ಪಾಲ್ಗೊಳ್ಳಲಿದ್ದಾರೆ. ತಮಿಳುನಾಡಿನ ತಿರುವಾರೂರಿನಲ್ಲಿ

ನಡೆಯಲಿರುವ ತಮಿಳುನಾಡು ಕೇಂದ್ರ ವಿಶ್ವವಿದ್ಯಾಲಯದ ೧೦ನೇ ಘಟಿಕೋತ್ಸವ ಸಮಾರಂಭದಲ್ಲೂ ಭಾಗವಹಿಸಲಿದ್ದಾರೆ.

<><><>

ಪ್ರಧಾನಿ ನರೇಂದ್ರ ಮೋದಿ ಇಂದು ಚೀನಾದ ಟಿಯಾಂಜಿನ್‌ನಲ್ಲಿ ನಡೆಯುತ್ತಿರುವ ಶಾಂಘೈ ಸಹಕಾರ ಸಂಘಟನೆ-ಎಸ್‌ಸಿಒ ಶೃಂಗಸಭೆಯ ಅಧಿವೇಶನವನ್ನುದ್ದೇಶಿಸಿ ಭಾಷಣ ಮಾಡಲಿದ್ದಾರೆ. ಟಿಯಾಂಜಿನ್‌ನಲ್ಲಿ ಮಾಧ್ಯಮಗಳಿಗೆ ಮಾಹಿತಿ ನೀಡಿದ ವಿದೇಶಾಂಗ ಕಾರ್ಯದರ್ಶಿ ವಿಕ್ರಂ ಮಿಸ್ರಿ, ಪ್ರಧಾನಿ ನರೇಂದ್ರ ಮೋದಿ ಅವರು ತಮ್ಮ ಭಾಷಣದಲ್ಲಿ ಎಸ್‌ಸಿಒ ವ್ಯಾಪ್ತಿ ಒಳಗೊಂಡಂತೆ ಪ್ರಾದೇಶಿಕ ಸಹಕಾರ ಬೆಳೆಸುವ ಭಾರತದ ದೃಷ್ಟಿಕೋನವನ್ನು ವಿವರಿಸಲಿದ್ದಾರೆ ಎಂದು ತಿಳಿಸಿದ್ದಾರೆ. ಅಧಿವೇಶನದ ನಂತರ, ಪ್ರಧಾನಿ ಅವರು ರಷ್ಯಾ ಅಧ್ಯಕ್ಷ ವ್ಲಾದಿಮಿರ್ ಪುಟಿನ್ ಅವರೊಂದಿಗೆ ದ್ವಿಪಕ್ಷೀಯ ಮಾತುಕತೆ ನಡೆಸಲಿದ್ದಾರೆ. ನಿನ್ನೆ ಪ್ರಧಾನಿ, ಚೀನಾ ಅಧ್ಯಕ್ಷ ಕ್ಷಿ ಜಿನ್‌ಪಿಂಗ್ ಅವರೊಂದಿಗೆ ಚರ್ಚೆ ನಡೆಸಿದ್ದು, ಭಾರತ-ಚೀನಾ ನಡುವಿನ ದ್ವಿಪಕ್ಷೀಯ ಸಂಬಂಧಗಳನ್ನು ಪುನರ್‌ನಿರ್ಮಿಸುವತ್ತ ಗಮನ ಕೇಂದ್ರೀಕರಿಸಿದ್ದರು. ಈ ಕುರಿತು ವಿವರಿಸಿದ ವಿಕ್ರಂ ಮಿಸ್ರಿ, ಪ್ರಧಾನಿ ಮೋದಿ ಅವರು, ಗಡಿಭಾಗಗಳಲ್ಲಿ ಶಾಂತಿ ಮತ್ತು ನೆಮ್ಮದಿಯ ಸ್ಥಿತಿಯು ದ್ವಿಪಕ್ಷೀಯ ಸಂಬಂಧಗಳ ಬಲವರ್ಧನೆಗೆ ಅವಶ್ಯಕವೆಂದು ತಿಳಿಸಿದ್ದಾರೆ. ಗಡಿಭಾಗಗಳಲ್ಲಿ ಶಾಂತಿ ಸ್ಥಾಪನೆ ಕುರಿತು ಉಭಯ ರಾಷ್ಟ್ರಗಳ ನಾಯಕರಲ್ಲಿ ಒಮ್ಮತ ಮೂಡಿದೆ ಎಂದು ಹೇಳಿದರು. ೨೦೨೦ರ ಜೂನ್‌ನಲ್ಲಿ ಗಲ್ವಾನ್ ಕಣಿವೆಯಲ್ಲಿ ನಡೆದ ಭೀಕರ ಘರ್ಷಣೆಯ ನಂತರ ಭಾರತ ಮತ್ತು ಚೀನಾದ ಸಂಬಂಧಗಳು ಹದಗೆಟ್ಟಿದ್ದವು. ಇತ್ತೀಚಿನ ಕೆಲವು ತಿಂಗಳಲ್ಲಿ ಈ ಸಂಬಂಧಗಳನ್ನು ಮರುಸ್ಥಾಪಿಸಲು ಉಭಯ ರಾಷ್ಟ್ರಗಳು ಹಲವು ಕ್ರಮಗಳನ್ನು ಕೈಗೊಂಡಿವೆ. ಮಾತುಕತೆ ವೇಳೆ ಪ್ರಧಾನಿ, ಭಯೋತ್ಪಾದನೆಯನ್ನು ಎದುರಿಸಲು ಪರಸ್ಪರ ಸಹಕಾರಕ್ಕೆ ಚೀನಾಗೆ ಕರೆ ನೀಡಿದ್ದಾರೆ ಎಂದು ವಿದೇಶಾಂಗ ಕಾರ್ಯದರ್ಶಿ ತಿಳಿಸಿದ್ದಾರೆ.

ಧ್ವನಿ : ವಿಕ್ರಂ ಮಿಸ್ತ್ರಿ (೩೫ ಸೆಕೆಂಡ್‌ಗಳು)

<><><>

ಕೇಂದ್ರ ಗೃಹ ಸಚಿವ ಅಮಿತ್ ಶಾ ಇಂದು ಜಮ್ಮುವಿನಲ್ಲಿ ನಡೆಯುತ್ತಿರುವ ರಕ್ಷಣಾ ಮತ್ತು ಪರಿಹಾರ ಕಾರ್ಯಾಚರಣೆಗಳನ್ನು ಮತ್ತು ಇತ್ತೀಚೆಗೆ ಸಂಭವಿಸಿದ ಮೇಘಸ್ಫೋಟ ಹಾಗೂ ಪ್ರವಾಹದಿಂದ ಉಂಟಾದ ಹಾನಿಯ ಕುರಿತು ಪರಿಶೀಲನೆ ನಡೆಸಲಿದ್ದಾರೆ. ಪ್ರವಾಹ ಪರಿಹಾರ ಕ್ರಮಗಳನ್ನು

ನಿರ್ಣಯಿಸಲು ಅವರು ಜಮ್ಮುವಿನ ರಾಜಭವನದಲ್ಲಿ ಉನ್ನತ ಮಟ್ಟದ ಪರಿಶೀಲನಾ ಸಭೆಯ ಅಧ್ಯಕ್ಷತೆ ವಹಿಸಲಿದ್ದಾರೆ.

ಈ ಕುರಿತು ಒಂದು ವರದಿ : ಅಭಯ್ (೩೪ ಸೆಕೆಂಡ್‌ಗಳು)

ಜಮ್ಮುವಿನಲ್ಲಿ ಕೇಂದ್ರ ಗೃಹ ಸಚಿವ ಅಮಿತ್ ಶಾ, ಮೊದಲಿಗೆ ಪ್ರವಾಹ ಪೀಡಿತ ಪ್ರದೇಶಗಳ ವೈಮಾನಿಕ ಸಮೀಕ್ಷೆ ನಡೆಸಲಿದ್ದು ನಂತರ ರಾಜಭವನದಲ್ಲಿ ಅಧಿಕಾರಿಗಳೊಂದಿಗೆ ಸಭೆ ನಡೆಸಲಿದ್ದಾರೆ, ಈ ಸಭೆಯಲ್ಲಿ ಲೆಫ್ಟಿನೆಂಟ್ ಗವರ್ನರ್ ಮನೋಜ್ ಸಿನ್ಹಾ, ಗೃಹ ಸಚಿವಾಲಯ ಮತ್ತು ಕೇಂದ್ರಾಡಳಿತ ಪ್ರದೇಶದ ಸ್ಥಳೀಯ ಆಡಳಿತದ ಹಿರಿಯ ಅಧಿಕಾರಿಗಳು ಇದುವರೆಗಿನ ರಕ್ಷಣೆ ಮತ್ತು ಪರಿಹಾರ ಕಾರ್ಯಗಳ ಬಗ್ಗೆ ವಿವರಿಸಲಿದ್ದಾರೆ. ರಕ್ಷಣಾ ಸಚಿವರು ಶ್ರೀ ಮಾತಾ ವೈಷ್ಣೋದೇವಿಯ ಮೂಲ ಶಿಬಿರವಾದ ಕತ್ರಾ ಸೇರಿದಂತೆ ವಿವಿಧ ಪ್ರವಾಹ ಪೀಡಿತ ಪ್ರದೇಶಗಳಿಗೆ ಭೇಟಿ ನೀಡಲಿದ್ದಾರೆ. ಮಾತಾ ವೈಷ್ಣೋದೇವಿ ಯಾತ್ರಾ ಮಾರ್ಗದಲ್ಲಿ ಇತ್ತೀಚೆಗೆ ಸಂಭವಿಸಿದ ಭೂಕುಸಿತದಲ್ಲಿ ಗಾಯಗೊಂಡ ಸಂತ್ರಸ್ತರನ್ನು ಭೇಟಿ ಮಾಡಲು ಕತ್ರಾದ ಕಾಕ್ರಯಲ್‌ನಲ್ಲಿರುವ ನಾರಾಯಣ ಆಸ್ಪತ್ರೆಗೂ ಸಚಿವರು ಭೇಟಿ ನೀಡಲಿದ್ದಾರೆ.

<><><>

ಭಾರತದ ಜಿಡಿಪಿ ಶೇಕಡ ೭.೮ ರಷ್ಟು ಬೆಳವಣಿಗೆ ದಾಖಲಿಸಿದ್ದು, ಪ್ರಧಾನಿ ನರೇಂದ್ರ ಮೋದಿ ಅವರಿಗಿಂತ ಉತ್ತಮವಾಗಿ ಆರ್ಥಿಕತೆಯನ್ನು ನಿರ್ವಹಿಸಲು ಯಾರಿಗೂ ಸಾಧ್ಯವಿಲ್ಲ ಎಂಬುದು ಸಾಬೀತಾಗಿದೆ ಎಂದು ಕೇಂದ್ರ ಸಚಿವ ಕಿರಣ್ ರಿಜಿಜು ಹೇಳಿದ್ದಾರೆ. ನಿನ್ನೆ ನವದೆಹಲಿಯ ಭಗವಾನ್ ಬಿರ್ಸಾ ಮುಂಡಾ ಭವನದಲ್ಲಿ ಬಿರ್ಸಾ ಮುಂಡಾ ಪ್ರತಿಮೆಯನ್ನು ಅನಾವರಣಗೊಳಿಸಿದ ನಂತರ ಸುದ್ದಿಗಾರರೊಂದಿಗೆ ಮಾತನಾಡಿದ ಸಚಿವರು, ಪ್ರಧಾನಿ, ಭಾರತೀಯ ಆರ್ಥಿಕತೆಯನ್ನು ಉತ್ತಮ ರೀತಿಯಲ್ಲಿ ನಡೆಸುತ್ತಿದ್ದಾರೆ ಎಂದು ವಿಶ್ವದ ಉನ್ನತ ಅರ್ಥಶಾಸ್ತ್ರಜ್ಞರು ಹೇಳುತ್ತಿದ್ದಾರೆ. ಭಾರತವನ್ನು ಸ್ವಾವಲಂಬಿಯನ್ನಾಗಿ ಮಾಡಲು, ಮೇಕ್ ಇನ್ ಇಂಡಿಯಾವನ್ನು ಉತ್ತೇಜಿಸುವುದು ಮತ್ತು ಸ್ವದೇಶಿ ದೃಷ್ಟಿಕೋನದ ಅಳವಡಿಕೆ ಅಗತ್ಯ ಎಂದು ಅವರು ತಿಳಿಸಿದರು.

ಧ್ವನಿ : ಕಿರಣ್ ರಿಜಿಜು (೧೩ ಸೆಕೆಂಡ್‌ಗಳು)

<><><>

ಹಿಮಾಚಲ ಪ್ರದೇಶ, ಉತ್ತರಾಖಂಡ, ಪಂಜಾಬ್ ಹಾಗೂ ಜಮ್ಮು ಮತ್ತು ಕಾಶ್ಮೀರದಲ್ಲಿ ಭಾರೀ ಮಳೆ, ದಿಢೀರ್ ಪ್ರವಾಹ, ಮೇಘಸ್ಫೋಟ ಮತ್ತು ಭೂಕುಸಿತಗಳಿಂದ ಉಂಟಾದ ಹಾನಿಯ ಪರಿಶೀಲನೆ ನಡೆಸಲು ಕೇಂದ್ರ ಗೃಹ ಸಚಿವಾಲಯ ಅಂತರ-ಸಚಿವಾಲಯ ಕೇಂದ್ರ ತಂಡಗಳನ್ನು ರಚಿಸಿದೆ. ಗೃಹ ಸಚಿವ ಅಮಿತ್ ಶಾ ಅವರ ನಿರ್ದೇಶನದ ಮೇರೆಗೆ, ಈ ತಂಡಗಳು ಘಟನಾ ಸ್ಥಳಗಳಲ್ಲೇ ಮೌಲ್ಯಮಾಪನ ನಡೆಸಲಿವೆ ಹಾಗೂ ಆಯಾ ರಾಜ್ಯ ಸರ್ಕಾರಗಳು ಕೈಗೊಂಡಿರುವ ಪರಿಹಾರ ಕಾರ್ಯಗಳನ್ನು ಪರಿಶೀಲಿಸಲಿವೆ ಎಂದು ಸಚಿವಾಲಯ ತಿಳಿಸಿದೆ. ಪ್ರತಿಯೊಂದು ತಂಡವನ್ನು ಗೃಹ ಸಚಿವಾಲಯ ಅಥವಾ ರಾಷ್ಟ್ರೀಯ ವಿಪತ್ತು ನಿರ್ವಹಣಾ ಪ್ರಾಧಿಕಾರದ ಜಂಟಿ ಕಾರ್ಯದರ್ಶಿ ಮಟ್ಟದ ಹಿರಿಯ ಅಧಿಕಾರಿ ನೇತೃತ್ವ ವಹಿಸಲಿದ್ದಾರೆ. ಈ ಅಂತರ-ಸಚಿವಾಲಯದ ತಂಡಗಳಲ್ಲಿ ಹಣಕಾಸು, ಕೃಷಿ ಮತ್ತು ರೈತರ ಕಲ್ಯಾಣ, ಜಲಶಕ್ತಿ, ವಿದ್ಯುತ್, ರಸ್ತೆ ಸಾರಿಗೆ ಮತ್ತು ಹೆದ್ದಾರಿಗಳು ಮತ್ತು ಗ್ರಾಮೀಣಾಭಿವೃದ್ಧಿ ಸಚಿವಾಲಯಗಳು ಮತ್ತು ಇಲಾಖೆಗಳ ಹಿರಿಯ ಅಧಿಕಾರಿಗಳು ಇರಲಿದ್ದಾರೆ. ೨೦೨೫-೨೬ರ ಆರ್ಥಿಕ ವರ್ಷದಲ್ಲಿ, ವಿಪತ್ತು ಪೀಡಿತ ರಾಜ್ಯಗಳ ಸಂತ್ರಸ್ತರಿಗೆ ತಕ್ಷಣವೇ ಪರಿಹಾರ ನೆರವು ನೀಡಲು ಸಾಧ್ಯವಾಗುವಂತೆ ಸರ್ಕಾರವು ೨೪ ರಾಜ್ಯಗಳಿಗೆ ರಾಜ್ಯ ವಿಪತ್ತು ನಿರ್ವಹಣಾ ನಿಧಿಯಿಂದ ೧೦ ಸಾವಿರ ಕೋಟಿ ರೂಪಾಯಿಗಳನ್ನು ಬಿಡುಗಡೆ ಮಾಡಿದೆ. ರಾಷ್ಟ್ರೀಯ ವಿಪತ್ತು ನಿರ್ವಹಣಾ ನಿಧಿಯಿಂದ ೧೨ ರಾಜ್ಯಗಳಿಗೆ ಸುಮಾರು ೨ ಸಾವಿರ ಕೋಟಿ ರೂಪಾಯಿಗಳನ್ನು ಬಿಡುಗಡೆ ಮಾಡಲಾಗಿದೆ.

<><><><>

ನವದೆಹಲಿಯಲ್ಲಿ ನಿನ್ನೆ ಯುವ ವ್ಯವಹಾರಗಳು ಮತ್ತು ಕ್ರೀಡಾ ಸಚಿವ ಡಾ. ಮನ್ಸುಖ್ ಮಾಂಡವಿಯಾ, ಸ್ಕೌಟ್ಸ್, ಗೈಡ್ಸ್, ರೋವರ್ಸ್ ಮತ್ತು ರೇಂಜರ್ಸ್‌ಗೆ ರಾಷ್ಟ್ರಪತಿ ಪ್ರಶಸ್ತಿ ಪ್ರಮಾಣಪತ್ರಗಳನ್ನು ಪ್ರದಾನ ಮಾಡಿದರು.  ಸಚಿವರು ದೇಶಾದ್ಯಂತ ೨೦೧೬, ೨೦೧೮ ರಿಂದ ೨೦೨೧ ರವರೆಗಿನ ೪೦೦ ಸ್ಕೌಟ್ಸ್, ಗೈಡ್ಸ್, ರೋವರ್ಸ್ ಮತ್ತು ರೇಂಜರ್ಸ್‌ಗೆ ಪ್ರಮಾಣಪತ್ರಗಳನ್ನು ಪ್ರದಾನ ಮಾಡಿದರು. ಬಳಿಕ ಸಮಾರಂಭವನ್ನುದ್ದೇಶಿಸಿ ಮಾತನಾಡಿದ ಅವರು, ದೇಶಸೇವೆ ಒಂದು ಮೌಲ್ಯವಾಗಿದ್ದು, ಇದು ಸ್ಕೌಟ್ಸ್ ಮತ್ತು ಗೈಡ್ಸ್‌ನ ಭಾಗವಾಗಲು ಜನರನ್ನು ಪ್ರೇರೇಪಿಸುತ್ತದೆ ಎಂದು ಹೇಳಿದರು. ಇದೇ ವೇಳೆ ಮಾತನಾಡಿದ ಭಾರತ್ ಸ್ಕೌಟ್ಸ್ ಮತ್ತು ಗೈಡ್ಸ್ ಅಧ್ಯಕ್ಷ ಡಾ. ಅನಿಲ್ ಕುಮಾರ್ ಜೈನ್, ಸ್ಕೌಟ್ಸ್ ಮತ್ತು ಗೈಡ್ಸ್ ಕೇವಲ ಕೌಶಲ್ಯ

ಆಧಾರಿತ ತರಬೇತಿ ಕಾರ್ಯಕ್ರಮವಲ್ಲ, ಅದು ಇಡೀ ಜಗತ್ತು ಒಂದೇ ಕುಟುಂಬ ಎಂದು ನೆನಪಿಸುವ ಒಂದು ಜೀವನ ವಿಧಾನವನ್ನು ಪ್ರತಿನಿಧಿಸುತ್ತದೆ ಎಂದು ಹೇಳಿದರು.

<><><><>

ತೈಲ ಮಾರಾಟ ಕಂಪನಿಗಳು ಇಂದಿನಿಂದ ಜಾರಿಗೆ ಬರುವಂತೆ ವಾಣಿಜ್ಯ ಎಲ್‌ಪಿಜಿ ಅನಿಲ ಸಿಲಿಂಡರ್‌ಗಳ ಬೆಲೆಯನ್ನು ೫೯.೫೦ ರೂಪಾಯಿ ಕಡಿತಗೊಳಿಸಿದೆ. ಬೆಲೆ ಇಳಿಕೆಯ ಬಳಿಕ ದೆಹಲಿಯಲ್ಲಿ ೧೯ ಕೆ.ಜಿ ಯ ವಾಣಿಜ್ಯ ಎಲ್‌ಪಿಜಿ ಸಿಲಿಂಡರ್ ೧ ಸಾವಿರದ ೫೮೦ ರೂಪಾಯಿಗೆ ಲಭ್ಯವಾಗಲಿದೆ. ಆದರೆ ೧೪.೨ ಕೆ.ಜಿ ಗೃಹ ಬಳಕೆ ಎಲ್‌ಪಿಜಿ ಸಿಲಿಂಡರ್ ಬೆಲೆಯಲ್ಲಿ ಯಾವುದೇ ಬದಲಾವಣೆಯಾಗಿಲ್ಲ. ವಾಣಿಜ್ಯ ಸಿಲಿಂಡರ್ ಬೆಲೆ ಇಳಿಕೆಯಿಂದ ದೇಶಾದ್ಯಂತ ವಾಣಿಜ್ಯ ಸಿಲಿಂಡರ್ ಗ್ರಾಹಕರಿಗೆ ಪ್ರಯೋಜನವಾಗಲಿದೆ. ಈ ಬೆಲೆ ಇಳಿಕೆ ಹೋಟೆಲ್‌ಗಳು ಸೇರಿದಂತೆ ಮತ್ತಿತರ ವಾಣಿಜ್ಯ ಕೇಂದ್ರಗಳಿಗೆ ನೇರವಾಗಿ ಪ್ರಯೋಜನಕಾರಿಯಾಗಲಿದೆ. ಈ ಬೆಲೆ ಪರಿಷ್ಕರಣೆ ಅಂತಾರಾಷ್ಟ್ರೀಯ ಕಚ್ಚಾತೈಲ ಬೆಲೆ ಮತ್ತು ಇತರೆ ಮಾರುಕಟ್ಟೆ ಅಂಶಗಳ ಆಧಾರದ ಮೇಲೆ ಪ್ರತಿ ತಿಂಗಳು ನಿಯಮಿತವಾಗಿ ಮಾಡಲಾಗುತ್ತದೆ ಎಂದು ಕಂಪನಿಗಳು ತಿಳಿಸಿವೆ.

<><><><>

ಬಿಹಾರದ ರಾಜ್‌ಗಿರ್‌ನಲ್ಲಿ ನಡೆಯುತ್ತಿರುವ ಏಷ್ಯಾಕಪ್ ಹಾಕಿ ಪಂದ್ಯಾವಳಿಯಲ್ಲಿ ನಿನ್ನೆ ನಡೆದ ಪಂದ್ಯದಲ್ಲಿ ಭಾರತ ಜಪಾನ್ ವಿರುದ್ಧ ಗೆಲುವು ಸಾಧಿಸಿ ಸೂಪರ್-೪ ರ ಹಂತಕ್ಕೆ ಪ್ರವೇಶ ಪಡೆದಿದೆ. ನಿನ್ನೆ ನಡೆದ 'ಎ' ಗುಂಪಿನ ಪಂದ್ಯದಲ್ಲಿ ಭಾರತ, ನಾಯಕ ಹರ್ಮನ್ ಪ್ರೀತ್ ಸಿಂಗ್ ಅವರ ೨ ಹಾಗೂ ಮನ್‌ದೀಪ್ ಸಿಂಗ್ ಅವರ ೧ ಗೋಲಿನ ನೆರವಿನೊಂದಿಗೆ ಜಪಾನ್ ವಿರುದ್ಧ ೩-೨ ಗೋಲುಗಳ ಅಂತರದಲ್ಲಿ ಜಯ ಸಾಧಿಸಿತು. ಇಂದು ಸಂಜೆ ೭.೩೦ಕ್ಕೆ ನಡೆಯುವ ಪಂದ್ಯದಲ್ಲಿ ಭಾರತ ಕಜಕಿಸ್ತಾನ್ ವಿರುದ್ಧ ಸೆಣಸಾಟ ನಡೆಸಲಿದೆ.

<><> ಇಲ್ಲಿಗೆ ವಾರ್ತಾ ಪ್ರಸಾರ ಮುಕ್ತಾಯವಾಯಿತು <><>